# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : **22 (84)**
ಸದಸ್ಯರ ಹೆಸರು : ಶ್ರೀ. ಡಾ॥ ಚಂದ್ರಶೇಖರ್ ಬಿ.ಪಾಟೀಲ್ (ಪದವೀಧರರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 13.09.2021
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ದಿನಾಂಕ:01.08.2008ರ ನಂತರ ನೇಮಕಾತಿಯಾದ ಸರ್ಕಾರಿ ಪ್ರೌಢಶಾಲಾ ಶಿಕ್ಷಕರಿಗೆ ರೂಪಾಯಿ 400/- ಮತ್ತು ಸರ್ಕಾರಿ ಪದವಿಪೂರ್ವ ಕಾಲೇಜಿನ ಉಪನ್ಯಾಸಕರಿಗೆ ರೂ.500/-ಗಳ ವಿಶೇಷ ಭತ್ಯೆ ನೀಡದಿರುವುದರಿಂದ, ಅವರ ಸೇವೆಯಲ್ಲಿ ಒಂದು ವೇತನ ಬಡ್ತಿಯನ್ನು ಕಳೆದುಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಆದೇಶ ಸಂಖ್ಯೆ: ಇಡಿ 255 ಎಸ್‌ಎಲ್‌ಬಿ 2016, ದಿನಾಂಕ:23/07/2018ರನ್ವಯ ದಿನಾಂಕ:01/08/2008ರ ನಂತರ ನೇಮಕಗೊಂಡ ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರು ಮತ್ತು ಉಪನ್ಯಾಸಕರುಗಳಿಗೆ ವಿಶೇಷ ಭತ್ಯೆಯನ್ನು ನೀಡಲು ಅವಕಾಶವಿರುವುದಿಲ್ಲ. |
| (ಆ) | ಬಂದಿದ್ದಲ್ಲಿ, ಅದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು) | |
| (ಇ) | ಸರ್ಕಾರಿ ಪ್ರೌಢ ಶಾಲೆ ಮತ್ತು ಅನುದಾನಿತ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮುಖ್ಯೋಪಾಧ್ಯಾಯರುಗಳಿಗೆ ರೂ.500/-ಗಳ ವಿಶೇಷ ಭತ್ಯೆ ನೀಡದಿರುವುದರಿಂದ, ಅವರ ಸೇವೆಯಲ್ಲಿ ಒಂದು ವೇತನ ಬಡ್ತಿ ಸಿಗದೇ ವಂಚಿತರಾಗಿದ್ದು, ಇವರುಗಳು ಕಿರಿಯ ನೌಕರರಿಗಿಂತ ಕಡಿಮೆ ಸಂಬಳ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು? | ಉದ್ಭವಿಸುವುದಿಲ್ಲ. |

**ಸಂಖ್ಯೆ: ಇಪಿ 163 ಎಸ್‌ಎಲ್‌ಬಿ 2021**

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ
ಸಚಿವರು